# ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ
## ಮುಕ್ತಗಂಗೋತ್ರಿ, ಮೈಸೂರು-570006

ದಿನಾಂಕ 13.07.2019 ರಂದು ಮಧ್ಯಾಹ್ನ 12.00 ಗಂಟೆಗೆ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಆಡಳಿತ ಭವನದ ಸಭಾಂಗಣದಲ್ಲಿ ಮಾನ್ಯ ಕುಲಪತಿಗಳಾದ ಪ್ರೊ. ವಿದ್ಯಾಶಂಕರ್ ಎಸ್. ಇವರ ಅಧ್ಯಕ್ಷತೆಯಲ್ಲಿ ನಡೆದ 11ನೇ ವಿಶೇಷ ಶೈಕ್ಷಣಿಕ ಮಂಡಳಿ ಸಭೆಯ ನಡವಳಿ.

| ಉಪಸ್ಥಿತರು | |
|---|---|
| **ಪ್ರೊ. ವಿದ್ಯಾಶಂಕರ್ ಎಸ್.**<br>ಮಾನ್ಯ ಕುಲಪತಿಗಳು ಹಾಗೂ<br>ಶೈಕ್ಷಣಿಕ ಮಂಡಳಿಯ ಅಧ್ಯಕ್ಷರು.<br>ಕರಾಮುವಿ, ಮೈಸೂರು. | **ಪ್ರೊ. ರಮೇಶ್. ಬಿ**<br>ಕುಲಸಚಿವರು<br>ಕರಾಮುವಿ.<br>ಮೈಸೂರು. |
| **ಪ್ರೊ. ಜಗದೀಶ**<br>ಡೀನ್ (ಶೈಕ್ಷಣಿಕ) ಹಾಗೂ<br>ಶೈಕ್ಷಣಿಕ ಮಂಡಳಿ ಸದಸ್ಯರು<br>ಕರಾಮುವಿ. ಮೈಸೂರು. | **ಡಾ. ಎ. ಖಾದರ್ ಪಾಷಾ**<br>ಹಣಕಾಸು ಅಧಿಕಾರಿಗಳು ಹಾಗೂ<br>ಶೈಕ್ಷಣಿಕ ಮಂಡಳಿ ಸದಸ್ಯರು<br>ಕರಾಮುವಿ. ಮೈಸೂರು. |
| **ಪ್ರೊ. ಡಿ.ಬಿ. ಬಸವರಾಜ್**<br>ಡೀನ್ (ಅಧ್ಯಯನ ಕೇಂದ್ರಗಳು) ಹಾಗೂ<br>ಶೈಕ್ಷಣಿಕ ಮಂಡಳಿ ಸದಸ್ಯರು<br>ಕರಾಮುವಿ, ಮೈಸೂರು. | **ಪ್ರೊ. ಎ. ರಂಗಸ್ವಾಮಿ**<br>ಕುಲಸಚಿವ (ಪರೀಕ್ಷಾಂಗ) ಹಾಗೂ<br>ಶೈಕ್ಷಣಿಕ ಮಂಡಳಿ ಸದಸ್ಯರು<br>ಕರಾಮುವಿ. ಮೈಸೂರು. |
| **ಅನುಪಸ್ಥಿತರು** | |
| **ಡಾ॥ ಲಕ್ಷ್ಮಿ.ಎನ್**<br>ಮುಖ್ಯಸ್ಥರು, ಶಿಕ್ಷಣ ಶಾಸ್ತ್ರ ವಿಭಾಗ ಹಾಗೂ<br>ಶೈಕ್ಷಣಿಕ ಮಂಡಳಿ ಸದಸ್ಯರು<br>ಕರಾಮುವಿ, ಮೈಸೂರು | |

ಸಭೆಗೆ ಹಾಜರಾಗಿದ್ದ ಸದಸ್ಯರುಗಳನ್ನು ಮಾನ್ಯ ಕುಲಪತಿಗಳು ಸ್ವಾಗತಿಸುವುದರೊಂದಿಗೆ ಸಭೆಯು ಪ್ರಾರಂಭವಾಯಿತು. ಮುಂದುವರೆದು ಮಾನ್ಯ ಕುಲಪತಿಗಳು ಮಾತನಾಡುತ್ತಾ ಶೈಕ್ಷಣಿಕ ಮಂಡಳಿ ಸಭೆಯನ್ನು ಕರೆದಿರುವ ಉದ್ದೇಶವನ್ನು ಸದಸ್ಯರುಗಳ ಗಮನಕ್ಕೆ ತಂದರು.

15/7/19
ಕುಲಸಚಿವರು

ಕುಲಪತಿಗಳು
15/7/19

ವಿಷಯ ಸಂಖ್ಯೆ : 11:01

ವಿಷಯ : 1. ವಿಶ್ವವಿದ್ಯಾನಿಲಯದ ಇನ್‌ಹೌಸ್ ಕೋರ್ಸ್‌ಗಳ 2013-14 ಮತ್ತು 2014-15ನೇ ಸಾಲಿನ ವಿದ್ಯಾರ್ಥಿಗಳು ಸಲ್ಲಿಸಿರುವ W.P No. 14903-917 Of 2019 ಮತ್ತು W.P No. 15628/2019 ಪ್ರಕರಣಗಳಲ್ಲಿ ಮಾನ್ಯ ಉಚ್ಛ ನ್ಯಾಯಾಲಯದ ದಿನಾಂಕ: 11-07-2019ರ ಆದೇಶದಂತೆ ಕ್ರಮವಹಿಸುವ ಕುರಿತು.

2. W.P No. 14903-917 Of 2019 ಮತ್ತು W.P No. 15628/2019 ಪ್ರಕರಣದಲ್ಲಿನ ದಿನಾಂಕ: 11-07-2019ರ ಆದೇಶದ ಸೌಲಭ್ಯವನ್ನು ತಮಗೂ ವಿಸ್ತರಿಸುವಂತೆ ಕೋರಿ 2013-14 ಮತ್ತು 2014-2015ನೇ ಸಾಲಿನ ಇತರೆ ವಿದ್ಯಾರ್ಥಿಗಳು ನೀಡಿರುವ ಮನವಿ ಬಗ್ಗೆ ಕ್ರಮವಹಿಸುವ ಕುರಿತು.

******

ವಿಶ್ವವಿದ್ಯಾನಿಲಯದಲ್ಲಿ 2013-14 ಮತ್ತು 2014-15ನೇ ಸಾಲಿನಲ್ಲಿ ವಿಶ್ವವಿದ್ಯಾನಿಲಯದ ಇನ್‌ಹೌಸ್ ನಾನ್-ಟೆಕ್ನಿಕಲ್ ಕೋರ್ಸ್‌ಗಳಿಗೆ ಪ್ರವೇಶಾತಿ ಪಡೆದ ಕೆಲವು ವಿದ್ಯಾರ್ಥಿಗಳು ಸರ್ಕಾರಿ ಆದೇಶ ಸಂಖ್ಯೆ: ಇಡಿ 54 ಯುಓವಿ 2017 ಭಾಗ-1 ದಿನಾಂಕ:05.03.2018ರ ಅನ್ವಯ; ತಮ್ಮ ಕೋರ್ಸ್‌ಗಳನ್ನು ಪೂರ್ಣಗೊಳಿಸುವಂತೆ, ತಮಗೆ ಪರೀಕ್ಷೆ ನಡೆಸಿ ಅಂಕಪಟ್ಟಿ ನೀಡುವಂತೆ, ಪರೀಕ್ಷೆಗಳಲ್ಲಿ ತೇರ್ಗಡೆ ಹೊಂದಿದ ವಿದ್ಯಾರ್ಥಿಗಳು ಅಂಕಪಟ್ಟಿ ನೀಡುವಂತೆ ಮತ್ತು ಅಂಕಪಟ್ಟಿ ವಿತರಿಸಲ್ಪಟ್ಟ ವಿದ್ಯಾರ್ಥಿಗಳು ಪದವಿ ಪ್ರಮಾಣ ಪತ್ರ ವಿತರಿಸುವಂತೆ ಹಾಗೂ ವಿಶ್ವವಿದ್ಯಾನಿಲಯದಿಂದ ಪಡೆದ ತಮ್ಮ ಪದವಿಗಳನ್ನು ಸದರಿ ಸರ್ಕಾರಿ ಆದೇಶ ಸಂಖ್ಯೆ: ಇಡಿ 54 ಯುಓವಿ 2017 ಭಾಗ-1 ದಿನಾಂಕ:05.03.2018 (ಪ್ರತಿ ಲಗತ್ತಿಸಿದೆ) ಅನ್ವಯ ಪರಿಗಣಿಸಲು ಆದೇಶಿಸುವಂತೆ ಮಾನ್ಯ ಉಚ್ಛ ನ್ಯಾಯಾಲಯಕ್ಕೆ W.P No. 14903-917 of 2019, W.P No.13951-953 of 2019ರ ಪ್ರಕರಣಗಳು ಸಲ್ಲಿಸಲ್ಪಟ್ಟಿರುತ್ತವೆ. W.P No. 14903-917 of 2019 ರಿಟ್ ಅರ್ಜಿಯಲ್ಲಿ ವಿಶ್ವವಿದ್ಯಾನಿಲಯ, ಯು.ಜಿ.ಸಿ, ಕರ್ನಾಟಕ ಸರ್ಕಾರ ಮತ್ತು ಮೈಸೂರು ವಿಶ್ವವಿದ್ಯಾನಿಲಯವನ್ನು ಎದುರುದಾರರನ್ನಾಗಿಸಲಾಗಿರುತ್ತದೆ.

**W.P No. 14903-917 of 2019 ಮತ್ತು W.P No. 15628/2019 ಪ್ರಕರಣದಲ್ಲಿ ಮಾನ್ಯ ಉಚ್ಛ ನ್ಯಾಯಾಲಯವು ದಿನಾಂಕ:11.07.2019ರ ಆದೇಶ ಹೊರಡಿಸುತ್ತಾ,**

**This application is filed by the petitioners seeking a direction to the respondent No.1 University to issue Marks Cards/Degree Certificates to the petitioners by following the directions issued by the State Government in G.O dated 05.03.2018 and also to direct the respondents to consider the degrees of the petitioners for the purpose of higher education, employment and promotions by following the directions issued by the State Government.**

15/7/19

ಕುಲಸಚಿವರು

ಕುಲಪತಿಗಳು

15/7/19

**Annexure-E dated 05.03.2018 issued by the State Government indicates that the students who have cleared the course area entitled to get Marks Cards/Degree Certificates.**

**It is discerned that the petitioner No.1 to 5 as well as 9 and 10 have cleared the course as contended. The Univesity respondent No.1 shall examine the same and issue the Marks Cards/Degree Certificates relating to the course cleared by the petitioners.**

**With the aforesaid observations and directions, I.A-1/2019 stands disposed of.**

ಮಾನ್ಯ ಉಚ್ಛ ನ್ಯಾಯಾಲಯದ ಈ ಮೇಲಿನ ಆದೇಶದ ಪ್ರತಿಯನ್ನು ಲಗತ್ತಿಸಿದ್ದು, ಸಭೆಯ ಅವಗಾಹನೆಗೆ ತರಲಾಗಿದೆ.

ಸರ್ಕಾರದ ಆದೇಶ ಸಂಖ್ಯೆ: ಇಡಿ 54 ಯುಓವಿ 2017 ಭಾಗ-1 ದಿನಾಂಕ:05.03.2018ರಲ್ಲಿ ಈ ಕೆಳಗಿನಂತೆ ಆದೇಶಿಸಲಾಗಿರುತ್ತದೆ.

"ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ ದಿನಾಂಕ:16.06.2015ರಂದು ವಿಶ್ವವಿದ್ಯಾಲಯ ಧನ ಸಹಾಯ ಆಯೋಗವು (ಯು.ಜಿ.ಸಿ) ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಮಾನ್ಯತೆಯನ್ನು ರದ್ದುಗೊಳಿಸುವ ಪೂರ್ವದಲ್ಲಿಯೇ ಯು.ಜಿ.ಸಿ ಮಾನ್ಯತೆ ಹೊಂದಿರುವ ತಾಂತ್ರಿಕೇತರ (ನಾನ್ ಟೆಕ್ನಿಕಲ್) ಹಾಗೂ ಕರ್ನಾಟಕ ರಾಜ್ಯದೊಳಗೆ ವ್ಯಾಸಂಗ ಮಾಡಿರುವ ಇನ್ -ಹೌಸ್ ಕೋರ್ಸ್‌ಗಳಿಗೆ 2013-14ಹಾಗೂ 2014-15ನೇ ಶೈಕ್ಷಣಿಕ ವರ್ಷದಲ್ಲಿ ಪ್ರವೇಶಾತಿ ಪಡೆದು ಸ್ನಾತಕ/ಸ್ನಾತಕೋತ್ತರ ಕೋರ್ಸುಗಳಲ್ಲಿ ತೇರ್ಗಡೆಯಾದವರಿಗೆ ಮುಂದಿನ ಶೈಕ್ಷಣಿಕ ವ್ಯಾಸಂಗ/ನೇಮಕಾತಿ ಹಾಗೂ ಮುಂಬಡ್ತಿಗಾಗಿ ಪರಿಗಣಿಸಲು ಆದೇಶಿಸಿದೆ.

ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದಲ್ಲಿ 2013ರ ಸಾಲಿನ ಪೂರ್ವದಲ್ಲಿ ಪ್ರವೇಶಾತಿ ಪಡೆದು ಉತ್ತೀರ್ಣರಾಗಿ ಅಂಕಪಟ್ಟಿ/ಪದವಿ ಪ್ರಮಾಣ ಪತ್ರಗಳನ್ನು ಪಡೆಯದೇ ಇರುವ ವಿದ್ಯಾರ್ಥಿಗಳಿಗೆ ಪದವಿ ಪ್ರಮಾಣ/ಅಂಕಪಟ್ಟಿಗಳನ್ನು ವಿತರಿಸಲು ಹಾಗೂ ತಾಂತ್ರಿಕೇತರ ಕೋರ್ಸುಗಳಲ್ಲಿ (ನಾನ್ ಟೆಕ್ನಿಕಲ್ ಕೋರ್ಸ್) ಹಲವು ಬ್ಯಾಚ್‌ಗಳಲ್ಲಿ ವ್ಯಾಸಂಗ ಮಾಡುತ್ತಿದ್ದ ಹಾಗೂ ಕೋರ್ಸುಗಳನ್ನು ಅಪೂರ್ಣಗೊಳಿಸಿದ ವಿದ್ಯಾರ್ಥಿಗಳಿಗೂ ಸಹ ವ್ಯಾಸಂಗ ಮುಂದುವರಿಸಲು ಹಾಗೂ ಪದವಿ ಪ್ರಮಾಣ ಪತ್ರಗಳನ್ನು ವಿತರಿಸಲು ಪರಿನಿಯಮಾವಳಿ ಅನ್ವಯ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯವು ಅಗತ್ಯ ಕ್ರಮವಹಿಸಲು ಆದೇಶಿಸಿದೆ".

ಈ ಹಿಂದೆ ದಿನಾಂಕ:22.03.2018ರಂದು ಜರುಗಿದ ವಿಶ್ವವಿದ್ಯಾನಿಲಯದ ಶೈಕ್ಷಣಿಕ ಮಂಡಳಿಯ 44ನೇ ಸಾಮಾನ್ಯ ಸಭೆಯಲ್ಲಿ ಅನುಷ್ಠಾನದ ಬಗ್ಗೆ ಈ ಕೆಳಗಿನಂತೆ ನಿರ್ಣಯಿಸಲಾಗಿರುತ್ತದೆ.

15/7/19      15/7/19.

ಕುಲಸಚಿವರು      ಕುಲಪತಿಗಳು

ಸರ್ಕಾರದ ಆದೇಶವನ್ನು ಯಥಾವತ್ತಾಗಿ ಒಪ್ಪಿಕೊಂಡು ಅನುಷ್ಠಾನಗೊಳಿಸಲು ತೀರ್ಮಾನಿಸಲಾಯಿತು. 2013-14 ಮತ್ತು 2014-15ನೇ ಸಾಲಿನಲ್ಲಿ ವಿಶ್ವವಿದ್ಯಾನಿಲಯದ ಇನ್-ಹೌಸ್ ಕೋರ್ಸ್‌ಗಳಿಗೆ ಪ್ರವೇಶಾತಿ ಪಡೆದು ಕೋರ್ಸ್ ಪೂರ್ಣಗೊಳಿಸದ ಅಭ್ಯರ್ಥಿಗಳಿಗೆ ವೈಯಕ್ತಿಕವಾಗಿ ಪತ್ರದ ಮುಖೇನ ಹಾಗೂ ಪ್ರಾದೇಶಿಕ ಕೇಂದ್ರಗಳ ಮೂಲಕ ಮಾಹಿತಿ ನೀಡಿ ಕೋರ್ಸ್ ಮುಂದುವರೆಸಲು ಅವಕಾಶ ಕಲ್ಪಿಸಲು ತೀರ್ಮಾನಿಸಲಾಯಿತು.

ಹಾಗೆಯೆ ಪರೀಕ್ಷೆ ಬರೆಯದ 2013-14 ಮತ್ತು 2014-15ನೇ ಸಾಲಿನಲ್ಲಿ ಪರೀಕ್ಷೆ ಬರೆಯದ ಮತ್ತು ಅನುತ್ತೀರ್ಣರಾಗಿರುವ ಸುಮಾರು 29647 ಮತ್ತು 36933 ವಿದ್ಯಾರ್ಥಿಗಳಿಗೆ ಪರೀಕ್ಷೆ ನಡೆಸಲು ಕೂಡಾ ತೀರ್ಮಾನಿಸಲಾಯಿತು.

ತೀರ್ಮಾನ : 1. ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಕರ್ನಾಟಕ ರಾಜ್ಯದಲ್ಲಿ ಇನ್-ಹೌಸ್ ಕೋರ್ಸ್‌ಗಳ 2013-14 ಮತ್ತು 2014-15ರಲ್ಲಿ ಪ್ರವೇಶಾತಿ ಪಡೆದು ತೇರ್ಗಡೆ ಹೊಂದಿದ ಕೆಲವು ವಿದ್ಯಾರ್ಥಿಗಳು ಸಲ್ಲಿಸಿರುವ **W.P No. 14903-917 0f 2019** ಮತ್ತು **W.P No. 15628/2019** ಪ್ರಕರಣದಲ್ಲಿ ಕರ್ನಾಟಕದ ಮಾನ್ಯ ಉಚ್ಚ ನ್ಯಾಯಾಲಯದ ದಿನಾಂಕ: 11.07.2019ರ ಆದೇಶವನ್ನು ಅನುಷ್ಠಾನಗೊಳಿಸಲು ನಿರ್ಣಯಿಸಿತು.

2. ಇಂತಹ ಇತರೆ ವಿದ್ಯಾರ್ಥಿಗಳ ಮನವಿಗಳನ್ನು ಪರಿಗಣಿಸುವ ಸಂಬಂಧ ಮಾನ್ಯ ಉಚ್ಚ ನ್ಯಾಯಾಲಯವು ಆಗಿಂದಾಗ್ಗೆ ನೀಡುವ ಆದೇಶಗಳನ್ನು ಯಥಾವತ್ತಾಗಿ ಅನುಷ್ಠಾನಗೊಳಿಸಲು ನಿರ್ಣಯಿಸಿತು.

----

<u>ಅಧ್ಯಕ್ಷರ ಅಪ್ಪಣೆಯ ಮೇರೆಗೆ ಮಂಡಿಸಲಾದ ಇತರೆ ವಿಷಯಗಳು :-</u>

ವಿಷಯ ಸಂಖ್ಯೆ 11:02

ವಿಷಯ : 2013-14 ಮತ್ತು 2014-15ರಲ್ಲಿ ಕರಾಮುವಿಯ ಇನ್-ಹೌಸ್ **(In-house non-technical Course)** ಪ್ರವೇಶಾತಿ ಪಡೆದು ತೇರ್ಗಡೆ ಹೊಂದಿದ ವಿದ್ಯಾರ್ಥಿಗಳನ್ನು ಉನ್ನತ ವ್ಯಾಸಂಗ ಮಾಡಲು ಅವಕಾಶ ಮಾಡಿಕೊಡುವ ಬಗೆಗೆ.

----

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಕುಲಸಚಿವ (ಪರೀಕ್ಷಾಂಗ) ರವರು ಮಾತನಾಡುತ್ತಾ, ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದಿಂದ ಕರ್ನಾಟಕ ರಾಜ್ಯದೊಳಗೆ ವ್ಯಾಸಂಗ ಮಾಡಿರುವ ಇನ್-ಹೌಸ್ ತಾಂತ್ರಿಕೇತರ ಕೋರ್ಸ್‌ಗಳಿಗೆ 2013-14 ಮತ್ತು 2014-15ರ ಶೈಕ್ಷಣಿಕ ವರ್ಷದಲ್ಲಿ ಪ್ರವೇಶಾತಿ ಪಡೆದು ಸ್ನಾತಕ / ಸ್ನಾತಕೋತ್ತರ ಕೋರ್ಸ್‌ಗಳಲ್ಲಿ ಮುಂದಿನ ಶೈಕ್ಷಣಿಕ ವ್ಯಾಸಂಗಕ್ಕೆ ಪರಿಗಣಿಸಲು ಸರ್ಕಾರಿ ಆದೇಶ ಸಂಖ್ಯೆ: ಇಡಿ 54 ಯುಓವಿ 2017 (ಭಾಗ-1), ಬೆಂಗಳೂರು, ದಿನಾಂಕ: 05.03.2018 ಹೊರಡಿಸಿದ್ದು, ಅದರಂತೆ ಅಂತಹ ವಿದ್ಯಾರ್ಥಿಗಳಿಗೆ ನಮ್ಮ ವಿಶ್ವವಿದ್ಯಾನಿಲಯದಲ್ಲಿ ಮುಂದಿನ ವ್ಯಾಸಂಗ ಮಾಡಲು ಅವಕಾಶ ಮಾಡಿಕೊಡಬೇಕೆಂದು ಸಭೆಯ ಗಮನಕ್ಕೆ ತಂದರು.

15/7/19

ಕುಲಸಚಿವರು

ಕುಲಪತಿಗಳು

15/7/19

ಈ ಬಗ್ಗೆ ಸುದೀರ್ಘವಾಗಿ ಚರ್ಚೆ ನಡೆಸಿದ ಸಭೆಯು ಇಂತಹ ವಿದ್ಯಾರ್ಥಿಗಳನ್ನು ಇತರೆ ವಿಶ್ವವಿದ್ಯಾನಿಲಯಗಳು ಪರಿಗಣಿಸುತ್ತಿದ್ದು, ನಮ್ಮ ವಿಶ್ವವಿದ್ಯಾನಿಲಯದಲ್ಲೂ ಪರಿಗಣಿಸುವ ಅಗತ್ಯವಿದೆ ಎಂದು ಸಭೆಯ ಗಮನಕ್ಕೆ ಮನವರಿಕೆಯಾಯಿತು.

ತೀರ್ಮಾನ : ಸರ್ಕಾರಿ ಆದೇಶ ಸಂಖ್ಯೆ: ಇಡಿ 54 ಯುಓವಿ 2017 (ಭಾಗ-1), ಬೆಂಗಳೂರು, ದಿನಾಂಕ: 05.03.2018 ಮತ್ತು **W.P No. 14903-917 0f 2019** ಮತ್ತು **W.P No. 15628/2019** ಪ್ರಕರಣಗಳ ಮಾನ್ಯ ಉಚ್ಚ ನ್ಯಾಯಾಲಯದ ತೀರ್ಮಾನದ ಹಿನ್ನೆಲೆಯಲ್ಲಿ 2013-14 ಮತ್ತು 2014-15ರ ಶೈಕ್ಷಣಿಕ ವರ್ಷದಲ್ಲಿ ಇನ್-ಹೌಸ್ ತಾಂತ್ರಿಕೇತರ ಕೋರ್ಸ್‌ಗಳಿಗೆ ಕರ್ನಾಟಕ ರಾಜ್ಯದೊಳಗೆ ಪ್ರವೇಶಾತಿ ಪಡೆದು ಸ್ನಾತಕ /ಸ್ನಾತಕೋತ್ತರ ಕೋರ್ಸ್‌ಗಳಲ್ಲಿ ತೇರ್ಗಡೆ ಹೊಂದಿದ ವಿದ್ಯಾರ್ಥಿಗಳು ಕರಾಮುವಿ ನಡೆಸುತ್ತಿರುವ ಕೋರ್ಸ್‌ಗಳಿಗೆ ಪ್ರವೇಶಾತಿ ಪಡೆದು ಮುಂದಿನ ಶೈಕ್ಷಣಿಕ ವ್ಯಾಸಂಗ ಮಾಡಲು ಅವಕಾಶ ಕಲ್ಪಿಸಿ ಕೊಡಲು ನಿರ್ಣಯಿಸಿತು.

----

ಅಂತಿಮವಾಗಿ 11ನೇ ವಿಶೇಷ ಶೈಕ್ಷಣಿಕ ಮಂಡಳಿ ಸಭೆಗೆ ಆಗಮಿಸಿ ಮಂಡಿತ ವಿಷಯಗಳ ಬಗ್ಗೆ ಚರ್ಚಿಸಿ, ತಮ್ಮ ಅಮೂಲ್ಯ ಸಲಹೆ, ಸೂಚನೆಗಳನ್ನು ನೀಡಿ, ಸಭೆಯನ್ನು ಸೂಸೂತ್ರವಾಗಿ ನಡೆಸಿಕೊಟ್ಟಿದ್ದಕ್ಕೆ ಎಲ್ಲ ಸದಸ್ಯರುಗಳಿಗೂ ಮಾನ್ಯ ಕುಲಪತಿಗಳು ಧನ್ಯವಾದಗಳನ್ನು ತಿಳಿಸುವುದರೊಂದಿಗೆ ಸಭೆಯು ಮುಕ್ತಾಯಗೊಂಡಿತು.

15/7/19

ಕುಲಸಚಿವರು ಹಾಗೂ
ಸದಸ್ಯ ಕಾರ್ಯದರ್ಶಿಗಳು

ಕುಲಪತಿಗಳು ಹಾಗೂ ಅಧ್ಯಕ್ಷರು
15/7/19